सत्यमेव जयते

"ELECTION URGENT"

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ. ಬೆಂಗಳೂರು-52

**ಆದೇಶ ಸಂಖ್ಯೆ: ರಾಚುಆ:24: ಇಜಿಪಿ: 2017, ದಿನಾಂಕ: 01-09-2017**

2017ರ ಅಕ್ಟೋಬರ್ ಮತ್ತು ಡಿಸೆಂಬರ್ ಮಾಹೆಯಲ್ಲಿ ಅವಧಿ ಮುಕ್ತಾಯವಾಗುವ ರಾಜ್ಯದ 11(ಹನ್ನೊಂದು) ಗ್ರಾಮ ಪಂಚಾಯಿತಿಗಳ ಎಲ್ಲಾ ಸದಸ್ಯ ಸ್ಥಾನಗಳಿಗೆ ಸಾರ್ವತ್ರಿಕ ಚುನಾವಣೆಯನ್ನು, ಮತ್ತು ಉಡುಪಿ ಜಿಲ್ಲೆ, ಉಡುಪಿ ತಾಲ್ಲೂಕಿನ ವಿಸರ್ಜಿತ ಶಿರಿಯಾರ ಗ್ರಾಮ ಪಂಚಾಯಿತಿಯ ತೆರವಾಗಿರುವ ಎಲ್ಲಾ 13 ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆಯ ಮೂಲಕ ಭರ್ತಿ ಮಾಡಲು ರಾಜ್ಯ ಚುನಾವಣಾ ಆಯೋಗವು **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಎ ಮತ್ತು 308ಎಬಿ ರನ್ವಯ ಚುನಾವಣಾ ವೇಳಾ ಪಟ್ಟಿಯನ್ನು ಈ ಕೆಳಕಂಡಂತೆ ಘೋಷಿಸಿದೆ.**

ಸಾರ್ವತ್ರಿಕ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳ ಸಂಖ್ಯೆ ವಿವರಗಳನ್ನು **ಅನುಬಂಧ-1ರಲ್ಲಿ** ತೋರಿಸಲಾಗಿದೆ.

**ಚುನಾವಣಾ ವೇಳಾಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 11-09-2017 (ಸೋಮವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 14-09-2017 (ಗುರುವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 15-09-2017 (ಶುಕ್ರವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 18-09-2017 (ಸೋಮವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00ಗಂಟೆಯವರೆಗೆ) | 24-09-2017 (ಭಾನುವಾರ) |
| 6 | ಮರು ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00ಗಂಟೆಯವರೆಗೆ) | 26-09-2017 (ಮಂಗಳವಾರ) |
| 7 | ಮತಗಳ ಎಣಿಕೆ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಘಂಟೆಯಿಂದ) (ತಾಲ್ಲೂಕು ಕೇಂದ್ರಗಳಲ್ಲಿ) | 27-09-2017 (ಬುಧವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 27-09-2017 (ಬುಧವಾರ) |

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿರುವ ಮೇಲ್ಕಂಡ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993ರ ನಿಯಮ 12ರ ಅಡಿಯಲ್ಲಿ ಚುನಾವಣಾ ಅಧಿಸೂಚನೆಯನ್ನು ಹೊರಡಿಸತಕ್ಕದ್ದು ಹಾಗೂ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿಸಿದ ಅಧಿಸೂಚನೆ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಛೇರಿಯಲ್ಲಿ ಇರುವ ಸೂಚನಾ ಫಲಕದ ಮೇಲೆ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲೂ ಸಹ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಫ್ಯಾಕ್ಸ್/ ಇ-ಮೇಲ್ ಮುಖಾಂತರ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಅಂದೇ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಚುನಾವಣಾಧಿಕಾರಿಗಳು ಪ್ರಪತ್ರ-3 ರಲ್ಲಿ ಚುನಾವಣಾ ನೋಟೀಸನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ, ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು ಹಾಗೂ ಚುನಾವಣಾ ನೋಟೀಸಿನಲ್ಲಿ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿ ಹೆಸರು, ಕ್ಷೇತ್ರದ ಹೆಸರು, ಸದಸ್ಯ ಸ್ಥಾನಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು.

**ಮೇಲ್ಕಂಡ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಇ.ಸಿ.ಐ.ಎಲ್. ಹೈದರಾಬಾದ್ ರವರು ತಯಾರಿಸಿರುವ ಮಲ್ಟಿಪಾಯ್ಸ್ ವಿದ್ಯುನ್ಮಾನ ಮತ ಯಂತ್ರದ (E.V.M.) ಮೂಲಕ ಚುನಾವಣೆ ನಡೆಸಲು ಹಾಗೂ ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿ., ಮೈಸೂರು ರವರು ತಯಾರಿಸಿರುವ "ಇಂಡೆಲಬಲ್ ಮಾರ್ಕರ್ ಪೆನ್"ನಲ್ಲಿ ಮತದಾರರಿಗೆ ಅಳಿಸಲಾಗದ ಶಾಯಿಯನ್ನು ಹಾಕುವಂತೆ ಆದೇಶಿಸಿದೆ.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಸಿ ರಂತೆ **ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ದಿನಾಂಕ:11-09-2017 ರಿಂದ ದಿನಾಂಕ:27-09-2017 ರ ವರೆಗೆ ಜಾರಿಯಲ್ಲಿರುತ್ತದೆ.**

ಗ್ರಾಮ ಪಂಚಾಯಿತಿಯ ಯಾವುದೇ ಕ್ಷೇತ್ರದಲ್ಲಿ ನಾಮಪತ್ರ ಸ್ವೀಕೃತವಾಗದೇ ಚುನಾವಣೆ ಪ್ರಕ್ರಿಯೆ ಮುಂದುವರೆಯಲಾಗದೆ ಇರುವಂತಹ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತ/ ನಾಮಪತ್ರ ಹಿಂತೆಗೆತ ಇತ್ಯಾದಿ ಕಾರಣಗಳಿಂದ ಯಾವುದೇ ಅಭ್ಯರ್ಥಿಯು ಕಣದಲ್ಲಿರದೆ **ಆ ಗ್ರಾಮ ಪಂಚಾಯಿತಿಯ** ಯಾವುದೇ ಸ್ಥಾನಕ್ಕೂ ಚುನಾವಣೆ ನಡೆಯದೇ ಇದ್ದಲ್ಲಿ ಅಥವಾ ಗ್ರಾಮ ಪಂಚಾಯಿತಿಯಲ್ಲಿನ ಚುನಾವಣೆ ಘೋಷಿಸಿರುವ ಎಲ್ಲಾ ಸ್ಥಾನಗಳೂ ಅವಿರೋಧವಾಗಿ ಆಯ್ಕೆಯಾಗಿದ್ದು, ಆಯ್ಕೆಯಾದ ಅಭ್ಯರ್ಥಿಯ ಫಲಿತಾಂಶವನ್ನು ಚುನಾವಣಾಧಿಕಾರಿಯು ಘೋಷಿಸಿದ್ದಲ್ಲಿ, ಅಂತಹ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನೀತಿಸಂಹಿತೆ ಜಾರಿಯಲ್ಲಿರುವುದು ತಕ್ಷಣದಿಂದ ನಿಂತುಹೋಗುತ್ತದೆ.

ಗ್ರಾಮ ಪಂಚಾಯಿತಿಯ ಯಾವುದೇ ಕ್ಷೇತ್ರದ ಸ್ಥಾನಕ್ಕೆ ಚುನಾವಣೆ ನಡೆಯುತ್ತಿದ್ದಲ್ಲಿ ಅಂತಹ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೇಲೆ ತಿಳಿಸಿರುವ ಅವಧಿಯವರೆಗೆ ನೀತಿಸಂಹಿತೆಯು ಜಾರಿಯಲ್ಲಿರುತ್ತದೆ.

ಚುನಾವಣೆ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು.

1. ಚುನಾವಣಾಧಿಕಾರಿಗಳು (ಆರ್.ಓ) ಚುನಾವಣೆ ನಡೆಯುವ ಪ್ರತಿಯೊಂದು ಮತಗಟ್ಟೆಯಲ್ಲಿ ಚುನಾವಣಾ ಪ್ರಕ್ರಿಯೆಗಳ ವಿಡಿಯೋಗ್ರಾಫಿಕ್ ಚಿತ್ರೀಕರಣ ಮಾಡಿಸುವುದು.
2. ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ನೀತಿ ಸಂಹಿತೆಯು ಜಾರಿಯಲ್ಲಿರುವ ಪ್ರದೇಶಗಳಲ್ಲಿರುವ ಎಲ್ಲಾ ಮದ್ಯದ ಅಂಗಡಿಗಳನ್ನು ಮತ್ತು ಮದ್ಯ ತಯಾರಿಕಾ ಘಟಕಗಳನ್ನು ಅದರ ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ವ್ಯವಸ್ಥಾಪಕರು ಮುಚ್ಚತಕ್ಕದ್ದು ಹಾಗೂ ಮೊಹರು ಮಾಡಿ ಅದರ ಕೀಯನ್ನು ಜಿಲ್ಲಾಧಿಕಾರಿಗಳಿಗೆ ಅಥವಾ ಅಧಿಕಾರ ವ್ಯಾಪ್ತಿಯುಳ್ಳ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟರಿಗೆ ಒಪ್ಪಿಸತಕ್ಕದ್ದು.
3. ನೀತಿಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಯಾರಾದರೂ ಮದ್ಯವನ್ನು ಸ್ವಾದೀನದಲ್ಲಿಟ್ಟುಕೊಂಡಿರುವುದು ಅಥವಾ ಮದ್ಯವನ್ನು ಸೇವಿಸಿ ಬೀದಿಯಲ್ಲಿ ರಂಪಾಟ ಮಾಡುತ್ತಿರುವುದು ಕಂಡು ಬಂದರೆ ಮುನ್ನೆಚ್ಚರಿಕೆ ಕ್ರಮವಾಗಿ ಚುನಾವಣೆ ಮುಕ್ತಾಯವಾಗುವವರೆಗೆ ಅಂತಹವರನ್ನು ಕಸ್ಟಡಿಯಲ್ಲಿ ಇಡತಕ್ಕದ್ದು.
4. ಮೇಲ್ಕಂಡ ಪ್ರಕರಣದಂತೆ ಚುನಾವಣೆ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಸೂಕ್ತ ತಂಡವನ್ನು ರಚಿಸಿ ಕ್ರಮಗಳನ್ನು ಕೈಗೊಳ್ಳುವುದು.
5. ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕವು ಅಧಿಸೂಚನೆ ಪ್ರಕಟಣೆಯ ದಿನಾಂಕದ ತರುವಾಯ ಬರುವ ಮೂರನೆಯ ದಿನವಾಗಿರುತ್ತದೆ ಎಂಬ ಬಗ್ಗೆ ಪ್ರಚಾರ ಮಾಡುವುದು.

-3.

**ವಿಶೇಷ ಸೂಚನೆ :**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಚುನಾವಣೆ ನಡೆಯಲಿರುವ ಗ್ರಾಮ ಪಂಚಾಯತಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿರುವ ಗ್ರಾಮ ಪಂಚಾಯತಿಯ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಚುನಾವಣೆ ನಡೆಸಲಾಗುವ ಗ್ರಾಮ ಪಂಚಾಯಿತಿಗೆ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಅವರಿಗೆ ತರಬೇತಿಯನ್ನು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ ಹಾಗೂ ಸುತ್ತೋಲೆ/ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ **ಆದೇಶ ಸಂಖ್ಯೆ:ಎಸ್‌ಇಸಿ:10:ಎಂಐಎಸ್‌ಸಿ:2016 ದಿ.29.06.2016 ಹಾಗೂ ತಿದ್ದುಪಡಿ ದಿ.06.07.2016** ರಂತೆ ಕ್ರಮವಹಿಸುವುದು.
4. ಚುನಾವಣೆ ನಡೆಸಲಾಗುತ್ತಿರುವ ಗ್ರಾಮ ಪಂಚಾಯಿತಿ ಸ್ಥಾನಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಸುದ್ದಿಯಾಗಿ (ವೆಚ್ಚ ಬಾರದಂತೆ) ಪ್ರಕಟಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು.
5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ ರಾಚುಆ:248: ಇಜಿಪಿ:2015, ದಿ.19.03.2015 ರಂತೆ ಗ್ರಾಮ ಪಂಚಾಯಿತಿ ಚುನಾವಣೆಗಳ **ಮತಪತ್ರದಲ್ಲಿ "NOTA" ಅವಕಾಶ ಇರುವುದಿಲ್ಲ.**

ಆದೇಶಾನುಸಾರ

(ಎಂ.ಪಿ.ರಂಜಿತಾ)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

ಗೆ,
ಜಿಲ್ಲಾಧಿಕಾರಿಗಳು,
ಬಾಗಲಕೋಟೆ, ಬೀದರ್, ಬೆಳಗಾವಿ,
ಬೆಂಗಳೂರು (ಗ್ರಾಮಾಂತರ), ಹಾವೇರಿ,
ಉಡುಪಿ ಜಿಲ್ಲೆ.

## ಅನುಬಂಧ–1

(ಆದೇಶ ಸಂಖ್ಯೆ ರಾಚುಆ:24:ಇಜಿಪಿ:2016 ದಿ.01–09–2017ಕ್ಕೆ ಲಗತ್ತಿಸಲಾದುದು)

### 2017–ಅಕ್ಟೋಬರ್ ಮತ್ತು ಡಿಸೆಂಬರ್ ಮಾಹೆಗಳಲ್ಲಿ ಅವಧಿ ಮುಕ್ತಾಯವಾಗುವ ಗ್ರಾಮ ಪಂಚಾಯಿತಿಗಳ ವಿವರ

| ಕ್ರ. ಸಂ. | ಜಿಲ್ಲೆಯ ಹೆಸರು | ತಾಲ್ಲೂಕಿನ ಹೆಸರು | | ಗ್ರಾಮ ಪಂಚಾಯತಿ ಹೆಸರು | ಒಟ್ಟು ಸ್ಥಾನಗಳ ಸಂಖ್ಯೆ |
|---|---|---|---|---|---|
| 1 | ಬಾಗಲಕೋಟೆ | ಹುನಗುಂದ | 1 | ಗಂಜಿಹಾಳ | 10 |
| 2 | ಬೀದರ್ | ಬೀದರ್ | 2 | ಅಷ್ಟೂರ | 18 |
| | | ಬೀದರ್ | 3 | ಯದಲಾಪುರ | 21 |
| 3 | ಬೆಳಗಾವಿ | ಸವದತ್ತಿ | 4 | ಮಲ್ಲೂರ | 17 |
| | | ಸವದತ್ತಿ | 5 | ಹೊಸೂರ | 20 |
| | | ಸವದತ್ತಿ | 6 | ಬಡ್ಲಿ | 9 |
| | | ಸವದತ್ತಿ | 7 | ಯಕ್ಕುಂಡಿ | 22 |
| | | ರಾಯಭಾಗ್ | 8 | ಜಲಾಲಪುರ | 12 |
| 4 | ಬೆಂಗಳೂರು (ಗ್ರಾ) | ಹೊಸಕೋಟೆ | 9 | ಮುತ್ಸಂದ್ರ | 23 |
| 5 | ಹಾವೇರಿ | ರಾಣಿಬೆನ್ನೂರ | 10 | ಬಿಲ್ಲಳ್ಳಿ | 17 |
| | | ಬ್ಯಾಡಗಿ | 11 | ಕೆರವಡಿ | 17 |
| **ವಿಸರ್ಜಿತ ಗ್ರಾಮ ಪಂಚಾಯಿತಿ** | | | | | |
| 1 | ಉಡುಪಿ | ಉಡುಪಿ | 1 | ಶಿರಿಯಾರ | 13 |

(ಎಂ.ಪಿ.ರಂಜಿತಾ)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ